# ಕರ್ನಾಟಕ ವಿಧಾನ ಪರಿಷತ್ತು

**ನೂರ ನಲವತ್ತಮೂರನೆಯ ಅಧಿವೇಶನ**
**(ಮುಂದುವರೆದ ಉಪವೇಶನ)**
**ಕಾರ್ಯಕಲಾಪಗಳ ಪಟ್ಟಿ**
**ಶುಕ್ರವಾರ, ದಿನಾಂಕ: 05ನೇ ಮಾರ್ಚ್, 2021**
**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎಂಟನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎಂಟನೆಯ ಪಟ್ಟಿ

## 02. ಅರ್ಜಿಗಳನ್ನೊಪ್ಪಿಸುವುದು

**ಅ) ಶ್ರೀ ಕೆ.ಪ್ರತಾಪಚಂದ್ರ ಶೆಟ್ಟಿ** ಅವರು ಕುಂದಾಪುರ ತಾಲ್ಲೂಕಿನ, ಹಂಗಳೂರು ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಶಿಥಿಲಾವಸ್ಥೆಯಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಬಡಾಕೆರೆಗೆ ತುರ್ತಾಗಿ 2 ಕೊಠಡಿಗಳನ್ನು ಮಂಜೂರು ಮಾಡಿ ವಿದ್ಯಾರ್ಥಿಗಳ ವಿದ್ಯಾರ್ಜನೆಗೆ ಉತ್ತೇಜನ ನೀಡುವ ಬಗ್ಗೆ ಅರ್ಜಿಯನ್ನು ಒಪ್ಪಿಸುವುದು.

**ಆ) ಶ್ರೀ ಕೆ.ಪ್ರತಾಪಚಂದ್ರ ಶೆಟ್ಟಿ** ಅವರು ಕುಂದಾಪುರ ತಾಲ್ಲೂಕು, ಹಂಗಳೂರು ಗ್ರಾಮ ಪಂಚಾಯತ್ ವ್ಯಾಪ್ತಿಯ ಕೋಟ್ಯಾನ್ ಬೆಟ್ಟು ಗ್ರಾಮದ ಜನವಸತಿ ಪ್ರದೇಶದ ಕೈಪಾಡಿ ದೇವಸ್ಥಾನದ ಹತ್ತಿರ ಕಿರು ಸೇತುವೆ ನಿರ್ಮಿಸಿ ರೈತರು ಮತ್ತು ಜನಸಾಮಾನ್ಯರಿಗೆ ಸಂಚಾರ ವ್ಯವಸ್ಥೆ ಕಲ್ಪಿಸುವ ಬಗ್ಗೆ ಅರ್ಜಿಯನ್ನು ಒಪ್ಪಿಸುವುದು.

**ಇ) ಶ್ರೀ ಮರಿತಿಬ್ಬೇಗೌಡ** ಅವರು ಮಂಡ್ಯ ಜಿಲ್ಲೆಯ ನಾಗಮಂಗಲ ತಾಲ್ಲೂಕಿನ ಮರಡಿಪುರ ಗ್ರಾಮದಲ್ಲಿ ಒತ್ತುವರಿಯಾಗಿರುವ ಗೋಮಾಳ ಜಮೀನನ್ನು ತೆರವುಗೊಳಿಸುವ ಬಗ್ಗೆ ಅರ್ಜಿಯನ್ನು ಒಪ್ಪಿಸುವುದು.

**ಈ) ಶ್ರೀ ಎಂ.ಎ. ಗೋಪಾಲಸ್ವಾಮಿ** ಅವರು ಪ್ರಧಾನ ಮಂತ್ರಿ ಆವಾಸ್ ವಸತಿ ಯೋಜನೆಯಡಿ ವಸತಿ ಹಂಚಿಕೆಯಲ್ಲಿ ಮೀಸಲಾತಿ ಪಾಲನೆ ಮಾಡದಿರುವ ಬಗ್ಗೆ ಅರ್ಜಿಯನ್ನು ಒಪ್ಪಿಸುವುದು.

**ಉ) ಶ್ರೀ ಕೆ.ಹರೀಶ್ ಕುಮಾರ್** ಅವರು ದಕ್ಷಿಣ ಕನ್ನಡ ಜಿಲ್ಲೆ, ಪುತ್ತೂರು ತಾಲ್ಲೂಕಿನ ಉಪ್ಪಿನಂಗಡಿ ಪೇಟೆಯ ಹೃದಯ ಭಾಗದಲ್ಲಿ ಸೂರಪ್ಪ ಕಾಂಪೌಂಡ್ ಮುಖಾಂತರ ತೆರೆದ ಚರಂಡಿಯಲ್ಲಿ ಕೊಳಚೆ ನೀರು ಹರಿಯುತ್ತಿದ್ದು, ಸಾರ್ವಜನಿಕರ ಆರೋಗ್ಯ ಸುರಕ್ಷತೆ ದೃಷ್ಟಿಯಿಂದ ಭೂಗತ ಚರಂಡಿ ವ್ಯವಸ್ಥೆ ಕಲ್ಪಿಸುವ ಬಗ್ಗೆ ಅರ್ಜಿಯನ್ನು ಒಪ್ಪಿಸುವುದು.

...2

## 03. ಗಮನ ಸೆಳೆಯುವ ಸೂಚನೆಗಳು

೦1. **ಶ್ರೀಯುತರುಗಳಾದ ಕೆ.ಟಿ. ಶ್ರೀಕಂಠೇಗೌಡ, ಮರಿತಿಬ್ಬೇಗೌಡ ಮತ್ತು ಪುಟ್ಟಣ್ಣ** ಅವರುಗಳು ದಿನಾಂಕ:10.06.2020ರಂದು ಆರ್ಥಿಕ ಇಲಾಖೆಯವರು ಹೊರಡಿಸಿರುವ ಸುತ್ತೋಲೆ ಸಂಖ್ಯೆ:ಆಇ/157/ವೆಚ್ಚ-8/2020ನ್ನು ಹಿಂಪಡೆದು ವಿವಿಧ ಇಲಾಖೆಗಳಲ್ಲಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡುವ ಹಾಗೂ ವೇತನಾನುದಾನಕ್ಕೆ ಒಳಪಡಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

೦2. **ಶ್ರೀಯುತರುಗಳಾದ ಪುಟ್ಟಣ್ಣ ಮತ್ತು ಕೆ.ಟಿ. ಶ್ರೀಕಂಠೇಗೌಡ** ಅವರುಗಳು 2006ರ ನಂತರ ನೇಮಕಗೊಂಡಿರುವ ರಾಜ್ಯದ ಎಲ್ಲಾ ಸರ್ಕಾರಿ ನೌಕರರಿಗೆ ಹಳೆಯ ಪಿಂಚಣಿ ಯೋಜನೆಯನ್ನು ಕಡ್ಡಾಯವಾಗಿ ಜಾರಿಗೊಳಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

## 04. ನಿಯಮ 330ರ ಮೇರೆಗೆ

೦1. **ಶ್ರೀಯುತರುಗಳಾದ ಮರಿತಿಬ್ಬೇಗೌಡ, ಪುಟ್ಟಣ್ಣ ಮತ್ತು ಕೆ.ಟಿ.ಶ್ರೀಕಂಠೇಗೌಡ** ಅವರುಗಳು 1995 ರಿಂದ 2005ನೇ ಸಾಲಿನವರೆಗೆ ಪ್ರಾರಂಭವಾಗಿರುವ ಕನ್ನಡ ಮಾಧ್ಯಮ ಶಾಲಾ/ಕಾಲೇಜುಗಳ ಬೋಧಕ ಬೋಧಕೇತರರಿಗೆ ವೇತನಾನುದಾನ ನೀಡಬೇಕೆಂದು ಹಾಗೂ ಸರ್ಕಾರಿ ಶಾಲೆಗಳಲ್ಲಿ ನೀಡುತ್ತಿರುವ ಸೌಲಭ್ಯಗಳನ್ನು ಕನ್ನಡ ಮಾಧ್ಯಮ ಶಾಲೆಗಳಿಗೂ ವಿಸ್ತರಿಸುವ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀ ಬಸವರಾಜ ಪಾಟೀಲ್ ಇಟಗಿ** ಅವರು ಬಳ್ಳಾರಿ ಜಿಲ್ಲೆಯ ಹೂವಿನಹಡಗಲಿ ತಾಲ್ಲೂಕಿನ ಪ್ರಾಥಮಿಕ ಶಾಲಾ ಶಿಕ್ಷಕರ ವೈದ್ಯಕೀಯ ವೆಚ್ಚದ ಬಿಲ್ಲುಗಳನ್ನು ಮರುಪಾವತಿಸುವಲ್ಲಿ ವಿಳಂಬವಾಗಿರುವ ಕುರಿತು ಪ್ರಸ್ತಾಪಿಸುವುದು.

## 05. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮೇಲೆ ಚರ್ಚೆ

| | |
|---|---|
| <u>ಶ್ರೀಯುತರುಗಳಾದ:</u><br>ಕೆ.ಟಿ.ಶ್ರೀಕಂಠೇಗೌಡ, ಮರಿತಿಬ್ಬೇಗೌಡ, ಕೆ.ಎ.ತಿಪ್ಪೇಸ್ವಾಮಿ ಮತ್ತು ಎಸ್.ಎಲ್. ಭೋಜೇಗೌಡ ಅವರುಗಳು | ತಮಿಳುನಾಡು ಸರ್ಕಾರವು ಕಾವೇರಿ ನದಿ ಪಾತ್ರದಲ್ಲಿನ ಮಾಯನೂರು ಜಲಾಶಯವನ್ನು ಅಕ್ರಮವಾಗಿ ಬಳಸಿಕೊಂಡಿರುವ ಕುರಿತು |

## ೦6. ಸದಸ್ಯರುಗಳ ಖಾಸಗಿ ಕಾರ್ಯಕಲಾಪಗಳು

### <u>ಖಾಸಗಿ ನಿರ್ಣಯ</u>

**ಶ್ರೀ ಯು.ಬಿ. ವೆಂಕಟೇಶ್ ಅವರು ಈ ಕೆಳಕಂಡ ಖಾಸಗಿ ನಿರ್ಣಯವನ್ನು ಮಂಡಿಸುವುದು:-**

"ದೇಸೀಯಾ ಪರಂಪರೆಯ ಆಯುರ್ವೇದ ವೈದ್ಯ ಪದ್ಧತಿಗೆ ಮನ್ನಣೆ ದೊರಕಿಸಿಕೊಡುವ ಸಲುವಾಗಿ ನೀತಿಯೊಂದನ್ನು ರೂಪಿಸುವ ಕುರಿತು."

**ಎಸ್. ನಿರ್ಮಲ**
**ಜಂಟಿ ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**